**All India Radio: Bangalore**
**National Bulletins In Kannada**
**28.05.2025 / 7.35 am**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**28.05.2025 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಇಂದು ಮಹತ್ವದ ಕೇಂದ್ರ ಸಚಿವ ಸಂಪುಟ ಸಭೆ

೨. ಕರ್ನಾಟಕದ ಖ್ಯಾತ ಚಲನಚಿತ್ರ ನಟ ಅನಂತನಾಗ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅನನ್ಯ ಸೇವೆ ಸಲ್ಲಿಸಿದ ೬೮ ಸಾಧಕರಿಗೆ ಪ್ರದ್ಮ ಪ್ರಶಸ್ತಿ ಪ್ರದಾನ

೩. ಕಲ್ಲಿದ್ದಲು ಆಮದು ಪ್ರಮಾಣದಲ್ಲಿ ಇಳಿಕೆ: ಸುಮಾರು ೬.೯೩ ಶತಕೋಟಿ ಡಾಲರ್‌ಗಳ ವಿದೇಶಿ ವಿನಿಮಯ ಉಳಿತಾಯ

೪. ಐಪಿಎಲ್ ಟಿ-೨೦ ಕ್ರಿಕೆಟ್; ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ೬ ವಿಕೆಟ್ ಜಯ; ಅಂಕಪಟ್ಟಿಯಲ್ಲಿ ೨ನೇ ಅಗ್ರಸ್ಥಾನ

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ದೆಹಲಿಯಲ್ಲಿಂದು ಕೇಂದ್ರ ಸಚಿವ ಸಂಪುಟದ ಮಹತ್ವದ ಸಭೆ ನಡೆಯಲಿದೆ. ಪ್ರಧಾನಿ ಅವರ ನಿವಾಸದಲ್ಲಿ ಬೆಳಗ್ಗೆ ೧೧ ಗಂಟೆಗೆ ನಡೆಯಲಿರುವ ಈ ಸಭೆಯಲ್ಲಿ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಭೂಪಟದಲ್ಲಿ ಕ್ಷಿಪ್ರವಾಗಿ ಕಂಡುಬರುತ್ತಿರುವ ಬದಲಾವಣೆಗಳ ಹಿನ್ನೆಲೆಯಲ್ಲಿ ಪ್ರಾಮುಖ್ಯವಾದ ನೀತಿ ಮತ್ತು ಭದ್ರತಾ ವಿಷಯಗಳ ಕುರಿತು ಚರ್ಚೆ ನಡೆಯಲಿದೆ. ಇದಕ್ಕೂ ಮುನ್ನ ಇದೇ ೧೪ ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ಭಾರತ ಸೆಮಿಕಂಡಕ್ಟರ್ ಮಿಷನ್ ಅಡಿಯಲ್ಲಿ ಉತ್ತರಪ್ರದೇಶದಲ್ಲಿ ೬ನೇ ಘಟಕ ಸ್ಥಾಪನೆಗೆ ಅನುಮೋದನೆ ನೀಡಲಾಗಿತ್ತು. ಮೇಕ್ ಇನ್ ಇಂಡಿಯಾ ಮತ್ತು ಡಿಜಿಟಲ್ ಆರ್ಥಿಕತೆ ಗುರಿಗಳ ಹಿನ್ನೆಲೆಯಲ್ಲಿ ಸೆಮಿಕಂಡಕ್ಟರ್ ವಲಯಕ್ಕೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಲು ನಿರ್ಧರಿಸಿದೆ.

**<><*<><>*><>**

ದೇಶದ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿರುವ ೬೮ ಮಂದಿ ಸಾಧಕರಿಗೆ ೨೦೨೫ನೇ ಸಾಲಿನ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಾದ ಪದ್ಮ ಪ್ರಶಸ್ತಿಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ದೆಹಲಿ ರಾಷ್ಟ್ರಪತಿ ಭವನದಲ್ಲಿ ನಿನ್ನೆ ಪ್ರದಾನ ಮಾಡಿದರು. ಈ ಪೈಕಿ ಮೂವರು ಗಣ್ಯರಿಗೆ ಪದ್ಮ ವಿಭೂಷಣ, ಒಂಭತ್ತು ಸಾಧಕರಿಕೆ ಪದ್ಮ ಭೂಷಣ ಮತ್ತು ೫೬ ಮಂದಿಗೆ ಪದ್ಮಶ್ರೀ ಪ್ರಶಸ್ತಿಗಳನ್ನು ನೀಡಿ ಗೌರಿವಿಸಿದರು. ಸುಪ್ರೀಂಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಜಗದೀಶ್ ಸಿಂಗ್ ಖೇಹರ್, ಕುಮುದಿನಿ ರಜನೀಕಾಂತ್ ಲೇಖಿಯಾ ಅವರಿಗೆ ಪದ್ಮವಿಭೂಷಣ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು. ಪ್ರಖ್ಯಾತ ಜಾನಪದ ಗಾಯಕರಾದ ಶಾರದಾ ಸಿನ್ಹಾ ಅವರಿಗೆ ಮರಣೋತ್ತರವಾಗಿ ಪದ್ಮವಿಭೂಷಣ ಪ್ರಶಸ್ತಿ ನೀಡಲಾಯಿತು. ಕರ್ನಾಟಕದ ಖ್ಯಾತ ಚಲನಚಿತ್ರ ನಟ ಅನಂತ್‌ನಾಗ್, ಹಿರಿಯ ಪತ್ರಕರ್ತ ಅಂಕಣಕಾರ ಎ.ಸೂರ್ಯಪ್ರಕಾಶ ಅವರಿಗೆ ಪದ್ಮಭೂಷಣ ಪ್ರಶಸ್ತಿ ಪ್ರದಾನ ಮಾಡಲಾಯಿತು. ಪ್ರಸಿದ್ಧ ವೈದ್ಯೆ ವಿಜಯಲಕ್ಷ್ಮೀ ದೇಶಮಾನೆ, ತೊಗಲುಬೊಂಬೆಯಾಟದ ಹಿರಿಯ ಕಲಾವಿದೆ ಭೀಮವ್ವ ದೊಡ್ಡ ಬಾಳಪ್ಪ ಶಿಳ್ಳೇಕ್ಯಾತರ ಸೇರಿದಂತೆ ಒಂಭತ್ತು ಮಂದಿಗೆ ಪದ್ಮಶ್ರೀ ಪ್ರಶಸ್ತಿಗಳನ್ನು ರಾಷ್ಟ್ರಪತಿಯವರು ಪ್ರದಾನ ಮಾಡಿದರು.

**<><*<><>*><>**

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಇಂದು ಮುಂಬೈಗೆ ಒಂದು ದಿನದ ಪ್ರವಾಸ ಕೈಗೊಳ್ಳಲಿದ್ದಾರೆ. ಈ ಭೇಟಿಯ ಸಮಯದಲ್ಲಿ ಉಪರಾಷ್ಟ್ರಪತಿ ಅವರು, ಮುಂಬೈನ ಅಂತರರಾಷ್ಟ್ರೀಯ ಜನಸಂಖ್ಯಾ ವಿಜ್ಞಾನ ಸಂಸ್ಥೆಯ ೬೫ ಮತ್ತು ೬೬ ನೇ ಘಟಿಕೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ.

**<><*<><>*><>**

೨೦೨೪-೨೫ರ ಆರ್ಥಿಕ ವರ್ಷದಲ್ಲಿ ದೇಶದಲ್ಲಿ ಕಲ್ಲಿದ್ದಲು ಆಮದು ಹಿಂದಿನ ಹಣಕಾಸು ವರ್ಷಕ್ಕೆ ಹೋಲಿಸಿದರೆ ಶೇಕಡ ೭.೯ ರಷ್ಟು ಕಡಿಮೆಯಾಗಿದೆ. ೨೦೨೪-೨೫ರ ಆರ್ಥಿಕ ವರ್ಷದಲ್ಲಿ ಕಲ್ಲಿದ್ದಲು ಆಮದು ಒಟ್ಟು ೨೪೩ ದಶಲಕ್ಷ ಟನ್‌ಗಳಿಷ್ಟಿದೆ. ಹಿಂದಿನ ಹಣಕಾಸು ವರ್ಷದಲ್ಲಿ ಇದು ೨೬೪.೫೩ ದಶಲಕ್ಷ ಟನ್‌ಗಳಷ್ಟಿತ್ತು ಎಂದು ಕಲ್ಲಿದ್ದಲು ಸಚಿವಾಲಯ ತಿಳಿಸಿದೆ. ಈ ಕಡಿತದಿಂದಾಗಿ ಸುಮಾರು ೭.೯೩ ಶತಕೋಟಿ ಡಾಲರ್‌ಗಳ ವಿದೇಶಿ ವಿನಿಮಯ ಉಳಿತಾಯವಾಗಿದೆ ಎಂದು ಸಚಿವಾಲಯ ತಿಳಿಸಿದೆ. ೨೦೨೪-೨೫ರ ಆರ್ಥಿಕ ವರ್ಷದಿಂದ ಕಲ್ಲಿದ್ದಲು ಆಧಾರಿತ ವಿದ್ಯುತ್ ಉತ್ಪಾದನೆಯು ಹಿಂದಿನ ಹಣಕಾಸು ವರ್ಷಕ್ಕೆ ಹೋಲಿಸಿದರೆ ಶೇಕಡ ೩.೦೪ ರಷ್ಟು ಪ್ರಗತಿ ಕಂಡಿದ್ದರೂ, ಉಷ್ಣ ವಿದ್ಯುತ್ ಸ್ಥಾವರಗಳಿಂದ ಮಿಶ್ರಣಕ್ಕಾಗಿ ಆಮದು ಪ್ರಮಾಣ ಶೇಕಡ ೪೧.೪ ರಷ್ಟು ತೀವ್ರವಾಗಿ ಕಡಿಮೆಯಾಗಿದೆ. ಕಲ್ಲಿದ್ದಲು ಉತ್ಪಾದನೆ ಮತ್ತು ಆಮದು ಕಡಿತ ಸೇರಿದಂತೆ ವಿವಿಧ ಉಪಕ್ರಮಗಳಿಂದಾಗಿ ೨೦೨೪-೨೫ರ ಆರ್ಥಿಕ ವರ್ಷದಲ್ಲಿ ಕಲ್ಲಿದ್ದಲು ಉತ್ಪಾದನೆಯಲ್ಲಿ ಪ್ರೋತ್ಸಾಹದಾಯಕ ಐದು ಪ್ರತಿಶತದಷ್ಟು ಬೆಳವಣಿಗೆಗೆ ಕಾರಣವಾಗಿವೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ಭಾರತದ ಸಂದೇಶ ವಿಶ್ವಾದ್ಯಂತ ಪ್ರತಿಧ್ವನಿಸುತ್ತಿದೆ, ಭಾರತದ ಬಹುಪಕ್ಷೀಯ ನಿಯೋಗಗಳು ಪಾಕಿಸ್ತಾನದ ಗಡಿಯಾಚೆಗಿನ ಭಯೋತ್ಪಾದನೆಯನ್ನು ಮತ್ತಷ್ಟು ಬಹಿರಂಗಪಡಿಸಲು ವಿವಿಧ ದೇಶಗಳಲ್ಲಿನ ವಿಶ್ವ ನಾಯಕರು, ಸಂಸದರು, ಚಿಂತಕರ ಚಾವಡಿಗಳು, ಮಾಧ್ಯಮ ಮತ್ತು ನಾಗರಿಕ ಸಮಾಜದೊಂದಿಗೆ ಸತತವಾಗಿ ಸಂವಹನ ನಡೆಸುತ್ತಿವೆ. ಶಿವಸೇನೆಯ ಸಂಸದ ಶ್ರೀಕಾಂತ್ ಶಿಂಧೆ ನೇತೃತ್ವದ ಸರ್ವಪಕ್ಷಗಳ ನಿಯೋಗ, ಕಾಂಗೋದ ನ್ಯಾಷನಲ್ ಅಸೆಬ್ಲಿಯ ವಿದೇಶಾಂಗ ವ್ಯವಹಾರಗಳ ಸಮಿತಿಯ ಅಧ್ಯಕ್ಷ ಪ್ರೊಫೆಸರ್ ಬೆರ್ತ್ ಹೋಲ್ಡ್ ಉಲುಂಗು ಅವರೊಂದಿಗೆ ನಿನ್ನೆ ಮಹತ್ವದ ಮಾತುಕತೆ ನಡೆಸಿತು. ಎನ್‌ಸಿಪಿ ಸಂಸದೆ ಸುಪ್ರಿಯಾ ಸುಳೆ ನೇತೃತ್ವದ ಮತ್ತೊಂದು ನಿಯೋಗ ನಿನ್ನೆ ದಕ್ಷಿಣಾ ಆಫ್ರಿಕಾಕ್ಕೆ ಭೇಟಿ ನೀಡಿದೆ. ಅಲ್ಲಿನ ಭಾರತದ ಹೈಕಮಿಷನರ್ ಪ್ರಭಾತ್ ಕುಮಾರ್ ನಿಯೋಗವನ್ನು ಆತ್ಮೀಯವಾಗಿ ಬರಮಾಡಿಕೊಂಡರು. ಮತ್ತೊಂದೆಡೆ ಜೆಡಿ (ಯು) ಸಂಸದ ಸಂಜಯ್ ಝಾ ನೇತೃತ್ವದ ಸರ್ವಪಕ್ಷ ನಿಯೋಗವು ಸಿಂಗಾಪುರದ ವಿದೇಶಾಂಗ ಸಚಿವರು, ಸಂಸದರು, ವಾಣಿಜ್ಯ ಮಂಡಳಿಯ ಪ್ರತಿನಿಧಿಗಳು ಮತ್ತು ಆ ದೇಶದ ವ್ಯಾಪಾರ ನಾಯಕರೊಂದಿಗೆ ಸಂವಾದ ನಡೆಸಿದೆ. ಭಾರತವು ಶಾಂತಿಪ್ರಿಯ ರಾಷ್ಟ್ರವಾಗಿದ್ದು, ಯಾವುದೇ ಭಯೋತ್ಪಾದನಾ ಕೃತ್ಯವನ್ನು ಪಾಕಿಸ್ತಾನದಿಂದ ಯುದ್ಧ ಕೃತ್ಯವೆಂದು ಪರಿಗಣಿಸಲಾಗುತ್ತದೆ ಎಂದು ಪುನರುಚ್ಚರಿಸಿದೆ.

<><*<><>*><>

ಭಯೋತ್ಪಾದನೆ ಯಾವುದೇ ರೂಪದಲ್ಲಿದ್ದರೂ ಅದು ನಾಗರಿಕ ಸಮಾಜ ಮತ್ತು ಮಾನವ ಅಭಿವೃದ್ಧಿಗೆ ಬಹುದೊಡ್ಡ ಬೆದರಿಕೆಯಾಗಿದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದ್ದಾರೆ. ಭಾರತ ಪ್ರವಾಸದಲ್ಲಿರುವ ಶ್ರೀಲಂಕಾ ಸಂಸತ್ತಿನ ಉಪ ಸ್ಪೀಕರ್ ಮತ್ತು ಸಮಿತಿಗಳ ಅಧ್ಯಕ್ಷ ಡಾ.ರಿಜ್ವಿ ಸಾಲಿಹ್ ನೇತೃತ್ವದ ಸಂಸದೀಯ ನಿಯೋಗದೊಂದಿಗೆ ನವದೆಹಲಿಯಲ್ಲಿ ನಿನ್ನೆ ನಡೆದ ದ್ವಿಪಕ್ಷೀಯ ಸಭೆಯಲ್ಲಿ ಓಂ ಬಿರ್ಲಾ ಅವರು ಈ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ವಿಶ್ವದ ಎಲ್ಲ ರಾಷ್ಟ್ರಗಳು, ಒಗ್ಗಟ್ಟಿನಿಂದ ಹಾಗೂ ಸಮಾನ ಕಾರ್ಯತಂತ್ರದೊಂದಿಗೆ ಹೋರಾಟ ಮಾಡಲಿವೆ ಎಂಬ ವಿಶ್ವಾಸವನ್ನು ಓಂ ಬಿರ್ಲಾ ವ್ಯಕ್ತಪಡಿಸಿದರು. ಭಯೋತ್ಪಾದನೆ ವಿರುದ್ಧ ಭಾರತ ನಡೆಸುತ್ತಿರುವ ಹೋರಾಟಕ್ಕೆ ಶ್ರೀಲಂಕಾದ ಸಂಸದೀಯ ನಿಯೋಗ ಸಹಮತ ಸೂಚಿಸಿರುವುದಕ್ಕೆ ಓಂಬಿರ್ಲಾ ಅವರು ಅಭಿನಂದನೆ ಸಲ್ಲಿಸಿದರು. ಭಾರತ ಮತ್ತು ಶ್ರೀಲಂಕಾ ನಡುವಿನ ಸ್ನೇಹ, ಪಾಲುದಾರಿಕೆಯ ಸಾಂಸ್ಕೃತಿಕ, ಆಧ್ಯಾತ್ಮಿಕ ಮತ್ತು ನಾಗರಿಕ ಮೌಲ್ಯಗಳನ್ನು ಆಧರಿಸಿದೆ ಎಂದು ಓಂ ಬಿರ್ಲಾ ಒತ್ತಿ ಹೇಳಿದರು. ಸಾಮಾನ್ಯ ಬೌದ್ಧ ಪರಂಪರೆಯು ಎರಡೂ ರಾಷ್ಟ್ರಗಳನ್ನು ಸಂಪರ್ಕಿಸುತ್ತದೆ ಎಂದು ಅವರು ಪ್ರತಿಪಾದಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಡಾ. ರಿಜ್ವಿ ಸಾಲಿಹ್, ಶ್ರೀಲಂಕಾ ನಿಯೋಗಕ್ಕೆ ನೀಡಿದ ಆತಿಥ್ಯಕ್ಕಾಗಿ ಓಂ ಬಿರ್ಲಾ ಅವರಿಗೆ ಧನ್ಯವಾದಗಳನ್ನು ಅರ್ಪಿಸಿದರು. ಭಾರತ ಮತ್ತು ಶ್ರೀಲಂಕಾ ಎರಡೂ ಶತಮಾನಗಳ ಹಿಂದಿನ ನಿಕಟ ಐತಿಹಾಸಿಕ, ಸಾಂಸ್ಕೃತಿಕ ಮತ್ತು ನಾಗರಿಕ ಸಂಬಂಧಗಳ ವೃದ್ಧಿಯಲ್ಲಿ ಭಾಗಿಯಾಗಿವೆ ಎಂದು ಹೇಳಿದರು. ಸಂಕಷ್ಟದ ಸಮಯದಲ್ಲಿ ಶ್ರೀಲಂಕಾಕ್ಕೆ ಭಾರತ ನೀಡಿದ ಬೆಂಬಲಕ್ಕಾಗಿ ಧನ್ಯವಾದಗಳನ್ನು ಅರ್ಪಿಸಿದರು. ಭಾರತ-ಶ್ರೀಲಂಕಾ ಸಂಬಂಧಗಳು ದಿನೇ ದಿನೆ ಮತಷ್ಟು ಬಲವರ್ಧನೆಯಾಗಲಿವೆ ಎಂಬ ಅಚಲ ವಿಶ್ವಾಸವನ್ನು ವ್ಯಕ್ತಪಡಿಸಿದರು.

<><*<><>*><>

ಕೇಂದ್ರೀಯ ನೇರ ತೆರಿಗೆ ಮಂಡಳಿ - ಸಿಬಿಡಿಟಿ, ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಸುವ ಕೊನೆಯ ದಿನಾಂಕವನ್ನು ಜುಲೈ ೩೧ ರಿಂದ ಸೆಪ್ಟೆಂಬರ್ ೧೫ ರವರೆಗೆ ವಿಸ್ತರಿಸಿದೆ. ಈ ವಿಸ್ತರಣೆಯಿಂದಾಗಿ, ಐಟಿಆರ್ ಫಾರ್ಮ್‌ಗಳಲ್ಲಿನ ಗಮನಾರ್ಹ ಪರಿಷ್ಕರಣೆಗಳ ಪರಿಶೀಲನೆ, ಸಿಸ್ಟಮ್ ಅಭಿವೃದ್ಧಿಯ ಕಾರಣಗಳಿಗಾಗಿ ಜನರಿಗೆ ಹೆಚ್ಚಿನ ಕಾಲಾವಕಾಶ ದೊರೆಯಲಿದೆ ಎಂದು ಮಂಡಳಿ ತಿಳಿಸಿದೆ. ಇದು ಎಲ್ಲರಿಗೂ ಸುಗಮ ಮತ್ತು ಹೆಚ್ಚು ನಿಖರವಾದ ಫೈಲಿಂಗ್ ಮಾಡಲು ಅನುವು ಮಾಡಿಕೊಡುತ್ತದೆ.

**<><*<><>*><>**

ಲಕ್ನೋದ ಏಕಾನಾ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಅಂತಿಮ ಗುಂಪು ಹಂತದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ - ಬೆಂಗಳೂರು ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಆರು ವಿಕೆಟ್‌ಗಳ ಜಯ ಸಾಧಿಸಿದೆ. ಈ ಮೂಲಕ ಅಂಕಪಟ್ಟಿಯಲ್ಲಿ ಅಗ್ರ-ಎರಡನೇ ಸ್ಥಾನ ಪಡೆದುಕೊಂಡಿದೆ. ಮೊದಲು ಬ್ಯಾಟ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ ನಿಗದಿತ ೨೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೨೭ ರನ್ ಗಳಸಿತು. ೨೨೮ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಆರ್‌ಸಿಬಿ ಕೇವಲ ೧೮.೪ ಓವರ್‌ಗಳಲ್ಲಿ ನಾಲ್ಕು ವಿಕೆಟ್‌ಗಳಿಗೆ ೨೩೦ ರನ್ ಗಳಿಸಿತು. ಆರ್‌ಸಿಬಿ ಪರ, ಹಂಗಾಮಿ ನಾಯಕ ಜಿತೇಶ್ ಶರ್ಮಾ, ಕೇವಲ ೩೩ ಎಸೆತಗಳಲ್ಲಿ ಅಜೇಯ ೮೫ ರನ್ ಗಳಿಸುವ ಮೂಲಕ ತಮ್ಮ ಕ್ರಿಕೆಟ್ ಬದುಕಿನ ಅತ್ಯುತ್ತಮ ಪ್ರದರ್ಶನ ತೋರಿದರು. ವಿರಾಟ್ ಕೊಹ್ಲಿ ೫೪ ರನ್‌ಗಳ ಕೊಡುಗೆ ನೀಡಿದರು. ಎರಡೂ ತಂಡಗಳು ನಾಳೆ ಕ್ವಾಲಿಫೈಯರ್ ೧ ರಲ್ಲಿ ಮುಖಾಮುಖಿಯಾಗಲಿವೆ. ಮೂರನೇ ಸ್ಥಾನಕ್ಕೆ ಕುಸಿದ ಗುಜರಾತ್ ಟೈಟಾನ್ಸ್ ಶುಕ್ರವಾರ ಎಲಿಮಿನೇಟರ್‌ನಲ್ಲಿ ಮುಂಬೈ ಇಂಡಿಯನ್ಸ್ ತಂಡವನ್ನು ಎದುರಿಸಲಿದೆ. ಕ್ವಾಲಿಫೈಯರ್-೨, ಜೂನ್ ೧ ರಂದು ನಿಗದಿಯಾಗಿದ್ದು, ಫೈನಲ್ ಪಂದ್ಯ ಜೂನ್ ೩ ರಂದು ನಡೆಯಲಿದೆ.

**<><*<><>*><>**

ಜೂನ್ ೩ ರಂದು ಅಹಮದಾಬಾದ್‌ನಲ್ಲಿ ಜರುಗಲಿರುವ ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-೧೮ರ ಫೈನಲ್ ಪಂದ್ಯವನ್ನು ಭಾರತೀಯ ಸೈನಿಕರಿಗೆ ಅರ್ಪಿಸಲು ಬಿಸಿಸಿಐ ನಿರ್ಧರಿಸಿದೆ. ಐಪಿಎಲ್ ಫೈನಲ್ ಪಂದ್ಯಕ್ಕೂ ಮುನ್ನ 'ಆಪರೇಷನ್ ಸಿಂಧೂರ್' ವಿಜಯೋತ್ಸವ ಆಚರಿಸಲು ತೀರ್ಮಾನಿಸಲಾಗಿದೆ. ಸಮಾರೋಪ ಸಮಾರಂಭಕ್ಕೆ ಭಾರತೀಯ ಕ್ರಿಕೆಟ್ ಆಡಳಿತ ಮಂಡಳಿಯು, ರಕ್ಷಣಾವಲಯದ ಮುಖ್ಯಸ್ಥರು ಮತ್ತು ಸಿಬ್ಬಂದಿ, ಭೂಸೇನೆ, ನೌಕಾಪಡೆ ಮತ್ತು ವಾಯುಪಡೆಯ ಮುಖ್ಯಸ್ಥರನ್ನು ಆಹ್ವಾನಿಸಿಲು ಎಂದು ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ತಿಳಿಸಿದ್ದಾರೆ. ಐಪಿಎಲ್ ಫೈನಲ್ ಪಂದ್ಯದ ಆರಂಭಕ್ಕೂ ಮುನ್ನ ಮಿಲಿಟರಿ ಬ್ಯಾಂಡ್‌ನ ಆಕರ್ಷಕ ಪ್ರದರ್ಶನ ನಡೆಯಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**